## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 172 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 05.03.2025.<br>(ಕಂದಾಯ ಇಲಾಖೆಯಿಂದ ವರ್ಗಾವಣೆಯಾದ ಪ್ರಶ್ನೆ) |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಲ್ಲಿ ಅನಧಿಕೃತ ಕಟ್ಟಡಗಳಿಗೆ ಕಡಿವಾಣ ಹಾಕಲು ಸರ್ಕಾರವು ಬಿ-ಖಾತಾ ನೀಡುತ್ತಿದ್ದು, ಅದೇ ರೀತಿ ಗ್ರಾಮ ಪಂಚಾಯತಿಗಳಿಗೆ ಬಿ-ಖಾತಾ ನೀಡಲಾಗುವುದೇ; (ವಿವರ ನೀಡುವುದು) | ಪ್ರಸ್ತುತ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಈ ಕೆಳಕಂಡ ಕ್ರಮಬದ್ಧವಲ್ಲದ ಆಸ್ತಿಗಳಿಗೆ ಸಂಬಂಧಿಸಿದಂತೆ, ಆಸ್ತಿಯ ಮಾಲೀಕರಿಂದ ದಾಖಲೆಗಳನ್ನು ಪಡೆದು ಆಸ್ತಿ ವಿವರವನ್ನು ಹಾಗೂ ಆ ಆಸ್ತಿಯ ತೆರಿಗೆ ಬೇಡಿಕೆ, ವಸೂಲಾತಿ ಮತ್ತು ಬಾಕಿ ವಿವರಗಳನ್ನು ತೆರಿಗೆ ನಿರ್ಧರಣೆ ಪಟ್ಟಿ (ನಮೂನೆ 11-ಬಿ) ಯಲ್ಲಿ ನೀಡಲಾಗುತ್ತಿದೆ.<br><br>1. ದಿನಾಂಕ:14-06-2013 ಕ್ಕಿಂತ ಪೂರ್ವದಲ್ಲಿ ಒಂದು ಬಾರಿ ಕ್ರಯವಾಗಿರುವ ನಿವೇಶನಗಳು,<br>2. ದಿನಾಂಕ:14-06-2013 ಕ್ಕೆ ಮೊದಲು ಕಟ್ಟಡವಾಗಿದ್ದು, ಈ ದಿನಾಂಕಕ್ಕಿಂತ ಮುಂಚಿನ 6 ತಿಂಗಳ ಪೂರ್ವದ ಯಾವುದಾದರೂ ಒಂದು ತಿಂಗಳ ವಿದ್ಯುಚ್ಛಕ್ತಿ ಬಿಲ್‌ನ್ನು ಒದಗಿಸಿರುವ ಪ್ರಕರಣಗಳು,<br>3. ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಪ್ರಕರಣ 95 (1) ರನ್ವಯ ಫಾರಂ ಬಿಲ್ಡಿಂಗ್ / ಹೌಸ್ ಎಂದು ಪರಿಗಣಿಸುವ ಆಸ್ತಿಗಳು ಮತ್ತು<br>4. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಆಸ್ತಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964 ರ ಪ್ರಕರಣ 95(2) ರನ್ವಯ ತಹಶೀಲ್ದಾರ್‌ರವರು ನೀಡಿರುವ ಹಿಂಬರಹದ ಪ್ರತಿ.<br><br>ಮುಂದುವರೆದು, ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ನಿವೇಶನಗಳು ಮತ್ತು ಕಟ್ಟಡಗಳನ್ನು (ಸರ್ಕಾರಿ/ಸ್ಥಳೀಯ ಸಂಸ್ಥೆ/ಶಾಸನಬದ್ಧ ಸಂಸ್ಥೆ/ಅರಣ್ಯ ಭೂಮಿಯನ್ನು ಹೊರತುಪಡಿಸಿ) ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಪ್ರತ್ಯೇಕ ವಹಿಯಲ್ಲಿ ದಾಖಲಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ತಿದ್ದುಪಡಿ ತರಲಾಗುತ್ತಿದೆ. ಅಧಿನಿಯಮಕ್ಕೆ ತಿದ್ದುಪಡಿ ತಂದ ನಂತರ ಈ ಸಂಬಂಧ ನಿಯಮಗಳನ್ನು ರೂಪಿಸಿ ದಿನಾಂಕ:14.06.2013ಕ್ಕೂ ಮೊದಲು ಹಾಗೂ ನಂತರ ನೋಂದಣಿಯಾದ ಎಲ್ಲಾ ನಿವೇಶನಗಳು ಮತ್ತು ಕಟ್ಟಡಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ಖಾತೆ ನೀಡಲು ಕ್ರಮ ಕೈಗೊಳ್ಳಲಾಗುವುದು. |
| (ಆ) | ಗ್ರಾಮ ಪಂಚಾಯತಿಗಳಿಗೆ ಬಿ-ಖಾತಾ ವಿತರಣೆ ಮಾಡಿದ ನಂತರ ಕಟ್ಟಡ ಮಾರಲು ಸರ್ಕಾರವು ಅವಕಾಶ ನೀಡುವುದೇ; | |
| (ಇ) | ಗ್ರಾಮ ಪಂಚಾಯತಿಗಳಿಗೆ ಬಿ-ಖಾತಾ ನೀಡಲು ಇರುವ ಮಾನದಂಡಗಳೇನು ಮತ್ತು ಯಾವ ಕಾಲಮಿತಿಯೊಳಗೆ ಬಿ-ಖಾತಾ ನೀಡಲಾಗುವುದು? (ವಿವರ ನೀಡುವುದು) | |

ಸಂಖ್ಯೆ: ಗ್ರಾಅಪ 167 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.